ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 1828/2015

ಚಾಸಾ: 8 ಪ್ರಾಸಾ: 3

ದಿನಾಂಕ: 09.07.2025

| | | |
|---|---|---|
| ವಾಗ್ಮೂಲದವರ ಹೆಸರು | : | ಗೋವಿಂದ ರಾಜು ಕೆ |
| ತಂದೆಯ ಹೆಸರು | : | ಕೃಷ್ಣ |
| ವಯಸ್ಸು | : | 54 ವರ್ಷ |
| ಉದ್ಯೋಗ | : | ಎ ಎಸ್ ಐ |
| ವಾಸ ಸ್ಥಳ | : | ಅಮಾಸ್ಯೆಬೈಲು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2015 ಜೂನ್ ನಿಂದ 2019 ಜುಲೈಯವರೆಗೆ ಕುಂದಾಪುರದ ಸಂಚಾರಿ ಪೊಲೀಸ್ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ: 29-03-2015 ರಂದು ಠಾಣಾ ಪ್ರಭಾರದಲ್ಲಿ ಇದ್ದಾಗ ಮಧ್ಯಾಹ್ನ 1 ಗಂಟೆಗೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ಪಿರ್ಯಾದನ್ನು ಸ್ವೀಕರಿಸಿಕೊಂಡು ಅದನ್ನು ಠಾಣಾ ಅಪರಾಧ ಸಂಖ್ಯೆ 96/2015 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವರದಿಯತನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ.

ದಿ: 31-03-2015 ರಂದು ಈ ಪ್ರಕರಣದ ಪ್ರತ್ಯಕ್ಷ ಸಾಕ್ಷಿದಾರರಾದ ಚಾಸಾ-2 ರವರು ತೋರಿಸಿದ ಸ್ಥಳದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ಪಂಚನಾಮೆಯನ್ನು ಸಂಜೆ 4 ರಿಂದ 4-45ರವರೆಗೆ ತಯಾರಿಸಿ ಸ್ಥಳದಲ್ಲಿ ಇದ್ದ ಕೊಡಲಿ, ಮುಷ್ಟಿ ಗಾತ್ರದ ಕಲ್ಲು ಮತ್ತು ಹಸಿ ಬೊಂಡವನ್ನು ವಶಕ್ಕೆ ಪಡೆದು ಸಾಕ್ಷಿದಾರರ ಸಹಿ ಪಡೆದಿರುತ್ತೇನೆ. ಸದ್ರಿ ಸ್ವತ್ತುಗಳನ್ನು ಸ್ವತ್ತು ಪಟ್ಟಿಯಲ್ಲಿ ಅಳವಡಿಸಿರುತ್ತೇನೆ.

ದಿ: 02-04-2015ರಂದು ಆರೋಪಿ ದಾಸ ಖಾರ್ವಿರವರನ್ನು ದಸ್ತಗಿರಿ ಮಾಡಿ ನಿಯಮವನ್ನು ಪಾಲಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಅದೇ ದಿನ ಚಾಸಾ-1ರವರ ಮರುಹೇಳಿಕೆ ಹಾಗೂ ಚಾಸಾ-2 ರಿಂದ 4 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-9 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ದೂರು, ಪ್ರ.ವ.ವರದಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-3 ಮತ್ತು 4 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-3(ಎ) ಮತ್ತು ನಿಪಿ-4(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-1 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಮುಮಾ1 ರಿಂದ 3ನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಚ್ ಎನ್.ಪಿ ರವರಿಂದಃ</u>**

ಚಾಸಾ-1 ರಿಂದ 4ರವರು ಒಂದೇ ಕುಟುಂಬದವರು ಎಂದರೆ ನನಗೆ ತಿಳಿದಿಲ್ಲ. ಚಾಸಾ-1 ರಿಂದ 4 ರವರನ್ನು ಹೊರತುಪಡಿಸಿ ಬೇರೆ ಯಾವುದೇ ಸಾಕ್ಷಿದಾರರು ಲಭ್ಯವಿರಲಿಲ್ಲ. ತಕ್ಷೀರು ಸ್ಥಳದ ಸ್ವಲ್ಪ ದೂರದಲ್ಲಿ ಬೇರೆ ಮನೆಗಳು ಇವೆ. ತನಿಖೆ ವೇಳೆಯಲ್ಲಿ ವಿಚಾರಿಸಿದಾಗ ಅವರು ಘಟನೆಯ ಮಾಹಿತಿ ಇಲ್ಲ ಎಂದು ನುಡಿದಿರುತ್ತಾರೆ. ತನಿಖೆಯಿಂದ ಆರೋಪಿತರು ಹಾಗೂ ಚಾಸಾ-1 ರಿಂದ 4 ರವರ ನಡುವೆ ಜಾಗದ ವಿಚಾರವಾಗಿ ತಕರಾರು ಇರುವುದು ಕಂಡು ಬಂದಿರುತ್ತದೆ. ಚಾಸಾ-1 ಮತ್ತು 3 ರವರ ವಿರುದ್ದ ಆರೋಪಿತರು ಪ್ರಕರಣವನ್ನು ದಾಖಲಿಸಿದ್ದಾರೆ ಎಂದರೆ ಸರಿ. ನಿಪಿ-3ನ್ನು ಪ್ರಾಸಾ-1ರವರು ಬರೆದಿರುತ್ತಾರೆ.

ಚಾಸಾ-1ರವರು ಯಾವುದೇ ದೂರನ್ನು ನೀಡಿಲ್ಲದೆ ನಾನು ನಿಪಿ-3 ನ್ನು ಹೇಳಿಸಿ ಬರೆಯಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಗುಣವಾಗಿ ನಿಪಿ-3 ನ್ನು ತಯಾರಿಸಿ ಪ್ರ.ವ.ವರದಿ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸುಳ್ಳು ಪ್ರಕರಣವಾದ ಕಾರಣ ಯಾವುದೇ ಸ್ವತಂತ್ರ ಸಾಕ್ಷಿದಾರರು ಪ್ರಕರಣದಲ್ಲಿ ಸಿಕ್ಕಿರುವುದಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿ ಕುಳಿತು ಪಂಚನಾಮೆಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಸಾಕ್ಷಿದಾರರ ಹೇಳಿಕೆ ಮತ್ತು ಮರುಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ